ಕರ್ನಾಟಕ ವಿಧಾನ ಸಭೆ, ಸಂಶೋಧನಾ ಮತ್ತು ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಶಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE : 07/12/2020

# ಸಭಾಪತಿ ಪದಚ್ಯುತಿಗೆ ಅವಕಾಶ ನೀಡದಿರಲು ಕಾರ್ಯತಂತ್ರ

## ಜೆಡಿಎಸ್ ನಡೆ ನೋಡಿಕೊಂಡು ಕಾರ್ಯತಂತ್ರ ರೂಪಿಸಲು ಕಾಂಗ್ರೆಸ್ ನಾಯಕರ ಚರ್ಚೆ

**ಬೆಂಗಳೂರು:** ಇದೇ ಅಧಿವೇಶನದಲ್ಲಿ ವಿಧಾನಪರಿಷತ್ ಸಭಾಪತಿ ಪದಚ್ಯುತಿಗೆ ಬಿಜೆಪಿ ನೋಟಿಸ್ ನೀಡಿದ್ದು, ಈ ಅಧಿವೇಶನದಲ್ಲಿ ಸಭಾಪತಿ ಪದಚ್ಯುತಿಗೆ ಅವಕಾಶ ದೊರಕಿಸಿಕೊಡದಂತೆ ಕಾರ್ಯತಂತ್ರ ರೂಪಿಸಲು ಕಾಂಗ್ರೆಸ್ ಹಿರಿಯ ನಾಯಕರ ಸಭೆಯಲ್ಲಿ ನಿರ್ಧರಿಸಲಾಗಿದೆ.



ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ ಅವರ ನಿವಾಸದಲ್ಲಿ ನಡೆದ ಸಭೆಯಲ್ಲಿ ಈ ಕುರಿತು ಚರ್ಚಿಸಲಾಗಿದ್ದು ಬಿಜೆಪಿಯ ಹತ್ತು ಸದಸ್ಯರು ಈಗಾಗಲೇ ಸಭಾಪತಿ ವಿರುದ್ಧ ಅವಿಶ್ವಾಸ ನಿರ್ಣಯ ಮಂಡನೆಗೆ ನೋಟಿಸ್ ಕೊಟ್ಟಿದ್ದಾರೆ. ಅವಿಶ್ವಾಸ ಮಂಡನೆಗೆ ಜೆಡಿಎಸ್ ಬೆಂಬಲ ಅಗತ್ಯವಿದೆ. ಜೆಡಿಎಸ್ ನಡೆ ನೋಡಿಕೊಂಡು ಕಾರ್ಯತಂತ್ರ ರೂಪಿಸಲು ಕಾಂಗ್ರೆಸ್ ನಾಯಕರು ಚರ್ಚೆ ನಡೆಸಿದ್ದಾರೆ.

ಈ ಅಧಿವೇಶನದಲ್ಲಿ ಹೇಗಾದರೂ ಮಾಡಿ ಸಭಾಪತಿ ಪದತ್ಯಾಗಕ್ಕೆ ಅವಕಾಶ ನೀಡಬಾರದು ಅದಕ್ಕೆ ಪೂರಕವಾದ ವಾತಾವರಣ ನಿರ್ಮಾಣವಾಗುವಂತೆ ನೋಡಿಕೊಳ್ಳುವುದು, ಬಿಜೆಪಿ ನಡೆಗೆ ಪ್ರತಿ ತಂತ್ರ ರೂಪಿಸಲು ಅಗತ್ಯ ಮಾರ್ಗ ಕಂಡುಕೊಳ್ಳುವ ಬಗ್ಗೆ ಕಾನೂನು ಸಲಹೆ ಪಡೆದುಕೊಳ್ಳಲು ನಿರ್ಧರಿಸಲಾಗಿದೆ ಎಂದು ತಿಳಿದು ಬಂದಿದೆ.

ಈ ಬಗ್ಗೆ ಪ್ರತಿಕ್ರಿಯಿಸಿದ ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ, ಪರಿಷತ್ ಸಭಾಪತಿ ಪದಚ್ಯುತಿಗೆ ಜೆಡಿಎಸ್ ನಡೆ ಏನು ಎನ್ನುವುದು ಗೊತ್ತಾಗಬೇಕು. ದೇವೇಗೌಡರು ಜಾತ್ಯತೀತರು ಎಂದು ಹೇಳಿಕೊಳ್ಳುತ್ತಾರೆ. ಅವರ ಜಾತ್ಯತೀತತೆ ಏನು ಎಂದು ಗೊತ್ತಾಗಬೇಕಲ್ಲಾ. ಜೆಡಿಎಸ್ ಬಿಜೆಪಿ ಬೆಂಬಲ ಕೊಟ್ಟರೆ ಮಾತ್ರ ಬಿಜೆಪಿ ಅವಿಶ್ವಾಸ ಮಂಡನೆ ಮಾಡುತ್ತದೆ. ಪರಿಷತ್ತಿನಲ್ಲಿ ಜೆಡಿಎಸ್ ಬಣ್ಣ ಏನು ಅಂತ ಜನರಿಗೆ ಗೊತ್ತಾಗಲಿ. ಅವರು ಜ್ಯಾತ್ಯತೀತರಾದರೆ ನಮ್ಮ ಪರವಾಗಿ ನಿಲ್ಲುತ್ತಾರೆ. ಜೆಡಿಎಸ್ ತನ್ನ ನಿಲುವು ಏನು ಎಂದು ಸ್ಪಷ್ಟಪಡಿಸಲಿ ಎಂದು ಹೇಳಿದರು.

### ಕುಮಾರಸ್ವಾಮಿಗೆ ಇಮೇಜ್ ಇಲ್ಲ

**ಬೆಂಗಳೂರು:** ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿಗೆ ಇಮೇಜೆ ಇಲ್ಲ, ಇಮೇಜ್ ಕಳೆದುಕೊಳ್ಳುವುದೇನು ಬಂತು ಎಂದು ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ ವ್ಯಂಗ್ಯವಾಡಿದ್ದಾರೆ.



ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ನಾನು ಜೆಡಿಎಸ್ ಬಿಟ್ಟು ಬಂದ ಮೇಲೆ ಅವರ ಪಕ್ಷದ ಶಾಸಕರ ಸಂಖ್ಯೆ 59 ರಿಂದ 28 ಕ್ಕೆ ಹೇಗೆ ಬಂತು? ಆ ಮೇಲೆ ಇವರ ಪಕ್ಷದ ಶಾಸಕರ ಸಂಖ್ಯೆ ಏರಲೇ ಇಲ್ಲ. ಅವರಿಗೆ ವೈಯಕ್ತಿಕ ವರ್ಚಸ್ಸಿದ್ದರೆ ಅವರ ಪಕ್ಷದ ಶಾಸಕರ ಸಂಖ್ಯೆ ಹೆಚ್ಚಾಗಬೇಕಿತ್ತು. ಅವರ ಬಗ್ಗೆ ಜನರಿಗೆ ಒಳ್ಳೆಯ ಅಭಿಪ್ರಾಯ ಇದ್ದರೆ ತಾನೇ ತಾನೆ ಅವರಿಗೆ ಜನಪ್ರಿಯತೆ ಇರುವುದು ಎಂದರು.

ಕುಮಾರಸ್ವಾಮಿಗೆ ವೈಯಕ್ತಿಕವಾಗಿ ಕಾಂಗ್ರೆಸ್ ಬಗ್ಗೆ ದ್ವೇಷ ಇದೆ. ಇವರು ಬಿಜೆಪಿ ಜೊತೆ ಹೋಗಿದ್ದರೆ ಸಿಎಂ ಆಗಿರುತ್ತಿದ್ದೆ ಎಂದು ಹೇಳಿದ ಮೇಲೆ ಇವರನ್ನು ಬಿಜೆಪಿಯ ಬಿ ಟೀಮ್ ಎಂದು ಕರೆಯದೆ ಮತ್ತೇನು ಹೇಳಬೇಕು? ಜೆಡಿಎಸ್ ಜೊತೆ ಸರ್ಕಾರ ಮಾಡುವ ವಿಷಯದಲ್ಲಿ ಮೊದಲ ಮಾತುಕತೆಯಲ್ಲಿ ನಾನು ಭಾಗಿಯೇ ಆಗಿರಲಿಲ್ಲ, ನಮ್ಮ ಹೈ ಕಮಾಂಡ್ ಕೋಮುವಾದಿ ಬಿಜೆಪಿ ಅಧಿಕಾರಕ್ಕೆ ಬರಬಾರದು ಎಂದು ಜೆಡಿಎಸ್‌ಗೆ ಬೆಂಬಲ ಸೂಚಿಸಿದ್ದರು ಎಂದು ಸ್ಪಷ್ಟಪಡಿಸಿದರು.

**ನಿರ್ಲಕ್ಷ್ಯ ಮಾಡಲು ನಿರ್ಧಾರ:** ಎಚ್.ಡಿ.ಕುಮಾರಸ್ವಾಮಿ ಕಾಂಗ್ರೆಸ್ ಹಾಗೂ ಸಿದ್ದರಾಮಯ್ಯ ಅವರ ಬಗ್ಗೆ ನೀಡಿರುವ ಹೇಳಿಕೆಗೆ ಪಕ್ಷದ ಹಿರಿಯ ನಾಯಕರು ಪ್ರತಿಕ್ರಿಯೆ ನೀಡದೇ ಇರುವುದು ಉತ್ತಮ ಎಂಬ ಅಭಿಪ್ರಾಯ ಕಾಂಗ್ರೆಸ್ ನಾಯಕರ ಸಭೆಯಲ್ಲಿ ವ್ಯಕ್ತವಾಗಿದೆ ಎಂದು ತಿಳಿದು ಬಂದಿದೆ.

### ನೋಟಿಸ್ ಯಾಕೆ ನೀಡಿದ್ದಾರೊ ಗೊತ್ತಿಲ್ಲ

**ಬೆಂಗಳೂರು:** ಬಿಜೆಪಿಯವರು ಯಾವ ಕಾರಣಕ್ಕೆ ಸಭಾಪತಿ ವಿರುದ್ಧ ಅವಿಶ್ವಾಸ ನಿರ್ಣಯ ನೋಟಿಸ್ ಕೊಟ್ಟಿದ್ದಾರೆ ಎನ್ನುವುದು ಗೊತ್ತಿಲ್ಲ ಎಂದು ವಿಧಾನ ಪರಿಷತ್ ವಿಪಕ್ಷ ನಾಯಕ ಎಸ್. ಆರ್. ಪಾಟೀಲ್ ಹೇಳಿದ್ದಾರೆ.



ಮಾಧ್ಯಮಗಳೊಂದಿಗೆ ಮಾತನಾಡಿ, ಸಭಾಪತಿ ಪ್ರತಾಪ್ ಚಂದ್ರ ಶೆಟ್ಟಿ ಸಂಪ್ರದಾಯ, ಘನತೆ ಗೌರವ ಹೆಚ್ಚಿಸುವ ಕೆಲಸ ಮಾಡಿದ್ದಾರೆ. ಕುರ್ಚಿಯಿಂದ ಗೌರವ ಬರೋದಲ್ಲ, ವ್ಯಕ್ತಿಯಿಂದ ಕುರ್ಚಿಗೆ ಗೌರವ ಬರಬೇಕು. ಸಭಾಪತಿ ಪ್ರತಾಪಚಂದ್ರ ಶೆಟ್ಟಿ ಅವರಿಂದ ಕುರ್ಚಿಗೆ ಗೌರವ ಬಂದಿದೆ ಎಂದು ಹೇಳಿದರು ಈ ವಿಷಯ ವಿಧಾನ ಪರಿಷತ್ ನಲ್ಲಿ ಚರ್ಚೆಗೆ ಬಂದಂಥ ಸಂದರ್ಭದಲ್ಲಿ ಏನು ಮಾಡಬೇಕು ಎಂದು ನಿರ್ಣಯ ಮಾಡುತ್ತೇವೆ ಎಂದರು. ಇದೇ ವೇಳೆ ಮಾಜಿ ಸಿಎಂ ಕುಮಾರಸ್ವಾಮಿ ಹೇಳಿಕೆಗೆ ಪ್ರತಿಕ್ರಿಯಿಸಿ, ಕಾಂಗ್ರೆಸ್ ಜೊತೆ ಬಂದಿದ್ದಕ್ಕೆ ಕುಮಾರಸ್ವಾಮಿಗೆ ಸಿಎಂ ಆಗುವ ಅವಕಾಶ ಸಿಕ್ಕಿತು. ಕಾಂಗ್ರೆಸ್ ಜೊತೆ ಬರದಿದ್ದರೆ ಸಿಎಂ ಆಗೋ ಅವಕಾಶ ಸಿಗುತ್ತಿರಲಿಲ್ಲ, ಅದನ್ನು ಅವರು ಅರ್ಥ ಮಾಡಿಕೊಳ್ಳಬೇಕು ಎಂದು ಹೇಳಿದರು.

> ಕುಮಾರಸ್ವಾಮಿಯವರು 14 ತಿಂಗಳು ಕಾಂಗ್ರೆಸ್ ಬೆಂಬಲ ಪಡೆದು ಮುಖ್ಯಮಂತ್ರಿಯಾಗಿರಲ್ಲಿಲ್ಲವೇ ? ಆಗ ಕಾಂಗ್ರೆಸ್ ಸರಿಯಾಗಿತ್ತಾ ಅವರಿಗೆ? ಆಗಲೇ ಮಾತನಾಡಬೇಕಿತ್ತು. ಈಗ ಕಾಂಗ್ರೆಸ್ ಕಡೆಗೆ ಬೆಟ್ಟು ಮಾಡಿ ತೋರಿಸುವುದು ಶೋಭೆ ತರುವುದಿಲ್ಲ.
>
> • **ಎಚ್.ಕೆ. ಪಾಟೀಲ್**, ಮಹಾರಾಷ್ಟ್ರ ಕಾಂಗ್ರೆಸ್ ಉಸ್ತುವಾರಿ

> ಕುಮಾರಸ್ವಾಮಿ ಮುಖ್ಯಮಂತ್ರಿಯಾಗಿದ್ದು, ದೇವೇಗೌಡರು ಪ್ರಧಾನಿಯಾಗಿದ್ದು ಕಾಂಗ್ರೆಸ್‌ನಿಂದ ಎನ್ನುವುದನ್ನು ಮರೆಯಬಾರದು. ಬಿಜೆಪಿ ಜೊತೆ ಹೋಗಿ ಬಂದ ನಂತರ ಏನಾಗಿದೆ ಎನ್ನುವುದನ್ನು ಅವರು ಬಹಿರಂಗ ಪಡಿಸಬೇಕು.
>
> • **ಆರ್.ಬಿ. ತಿಮ್ಮಾಪುರ್**, ಮಾಜಿ ಸಚಿವ